ರಾಜ್ಯದಲ್ಲಿ ಅಕ್ರಮ ಗಣಿಗಾರಿಕೆ ಮತ್ತು ಮರಳು ಸಾಗಣೆಕೆ

401 (880) ಶ್ರೀ ಖಾದರ್ ಯು.ಟಿ. (ಮಂಗಳೂರು) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಅಕ್ರಮ ಮರಳು ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ವರ್ಷ ನಡೆದ ಒಟ್ಟು ಪ್ರಕರಣಗಳು ಎಷ್ಟು;

ಆ) ಹಾಗಿದ್ದಲ್ಲಿ, ಅಕ್ರಮ ಮರಳು ಗಣಿಗಾರಿಕೆಯನ್ನು ತಡೆಗಟ್ಟಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು;

ಇ) ರಾಜ್ಯದಲ್ಲಿ ನೂತನ ಮರಳು ಗಣಿಗಾರಿಕೆಯನ್ನು ಜಾರಿಗೆ ತರಲು ಸರ್ಕಾರ ನಿರ್ಧರಿಸಿದೆಯೇ?

ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು)

ಅ) ಅಕ್ರಮ ಮರಳು ಗಣಿಗಾರಿಕೆ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ರಾಜ್ಯದಾದ್ಯಂತ ಈ ವರ್ಷ ಒಟ್ಟು 254 ಅಕ್ರಮ ಮರಳು ಗಣಿಗಾರಿಕೆ ಪ್ರಕರಣಗಳನ್ನು ಗುರ್ತಿಸಲಾಗಿದೆ.

ಆ) ಅಕ್ರಮ ಮರಳು ಗಣಿಗಾರಿಕೆಯನ್ನು ತಡೆಗಟ್ಟಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಮರಳು ಉಸ್ತುವಾರಿ/ಗಣಿಗಾರಿಕೆ ಸಮಿತಿ ರಚಿಸಿದ್ದು, ಇದರ ಸದಸ್ಯ ಇಲಾಖೆಗಳ ಸಿಬ್ಬಂದಿಯವರು ತಪಾಸಣೆ ಮಾಡಿ, ಅಕ್ರಮ ಮರಳು ಗಣಿಗಾರಿಕೆ ಮಾಡುತ್ತಿದ್ದ 77 ಜನರ ವಿರುದ್ಧ ಮೊಕದ್ದಮೆಗಳನ್ನು ದಾಖಲಿಸಿರುತ್ತಾರೆ. ಅಧಿಕೃತ ಪರವಾನಗಿಯಿಲ್ಲದೆ ಖನಿಜ ಸಾಗಾಣಿಕೆ ಮಾಡುತ್ತಿದ್ದ 4432 ವಾಹನಗಳಿಂದ ರೂ. 320.41 ಲಕ್ಷ ದಂಡ ವಸೂಲಿ ಮಾಡಲಾಗಿದೆ.

ಇ) ದಿನಾಂಕ 29–1–2011ರ ಆದೇಶ ಸಂಖ್ಯೆ ಸಿಐ 84 ಎಂಎಂಎನ್ 2009ರಂತೆ ರಾಜ್ಯದಾದ್ಯಂತ (ಕರಾವಳಿ ಜಿಲ್ಲೆಗಳನ್ನು ಹೊರತುಪಡಿಸಿ) ಏಕ ರೀತಿಯ ಹೊಸ ಮರಳು ನೀತಿಯನ್ನು ಸರ್ಕಾರವು ಜಾರಿಗೊಲಿಸಿದೆ. ದಿನಾಂಕ 1–4–2011ರಿಂದ ಮರಳು ಗಣಿಗಾರಿಕೆಯ ಸಂಪೂರ್ಣ ಹೊಣೆಗಾರಿಕೆಯನ್ನು ಲೋಕೋಪಯೋಗಿ ಇಲಾಖೆಗೆ ವಹಿಸಲಾಗಿದೆ. ಕರಾವಳಿ ಜಿಲ್ಲೆಗಳಿಗೆ

ಸಂಬಂಧಿಸಿದಂತೆ ಪ್ರತ್ಯೇಕವಾಗಿ ಪರಿಶೀಲಿಸಿ ಮಾರ್ಗಸೂಚಿಯನ್ನು ರಚಿಸಲಾಗುತ್ತಿದೆ.

ಗ್ರಾಮ ಪಂಚಾಯ್ತಿ / ಪಟ್ಟಣ ಪಂಚಾಯ್ತಿಗಳನ್ನು ಮೇಲ್ದರ್ಜೆಗೆರಿಸುವುದು

402(881) ಶ್ರೀ ಖಾದರ್ ಯು.ಟಿ. (ಮಂಗಳೂರು) ಮಾನ್ಯ ನಗರಾಭಿವೃದ್ಧಿ, ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹತ್ತು ಸಾವಿರಕ್ಕೂ ಹೆಚ್ಚಿನ ಜನ ಸಂಖ್ಯೆಯನ್ನು ಹೊಂದಿರುವ ಗ್ರಾಮ ಪಂಚಾಯತಿಗಳನ್ನು ಪಟ್ಟಣ ಪಂಚಾಯ್ತಿಗಳನ್ನಾಗಿ ಪರಿವರ್ತಿಸುವ ಉದ್ದೇಶ ಸರ್ಕಾರ ಹೊಂದಿದೆಯೇ;

ಆ) ಹಾಗಿದ್ದಲ್ಲಿ, ದಕ್ಷಿಣ ಕನ್ನಡ ಜಿಲ್ಲೆಯ ಯಾವ ಯಾವ ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸಲಾಗುವುದು;

ಇ) ಈ ಮೇಲ್ದರ್ಜೆಗೇರಿದ ಪಟ್ಟಣ ಪಂಚಾಯ್ತಿಗಳಿಗೆ ಹೆಚ್ಚಿನ ಅನುದಾನ ಹಾಗೂ ಮೂಲಭೂತ ಸೌಲಭ್ಯಕ್ಕೆ ಆದ್ಯತೆ ನೀಡಲಾಗುವುದೇ (ವಿವರ ನೀಡುವುದು)?

ಎಸ್. ಸುರೇಶ್ ಕುಮಾರ್ (ಮಾನ್ಯ ನಗರಾಭಿವೃದ್ಧಿ, ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು)

ಅ) ಕಂದಾಯ ಇಲಾಖೆಯ ಆದೇಶ ಸಂಖ್ಯೆ: ಆರ್‌ಡಿ 70 ಭೂದಪು 2009, ದಿನಾಂಕ 24–12–2009ರಲ್ಲಿ ಕರ್ನಾಟಕ ರಾಜ್ಯದಲ್ಲಿ 2011ರ ಜನಗಣತಿ ಕಾರ್ಯವು ಪ್ರಗತಿಯಲ್ಲಿರುವುದರಿಂದ ದಿನಾಂಕ 31–3–2011 ರವರೆಗೆ ಯಾವುದೇ ಪ್ರದೇಶವನ್ನು ಹೊಸದಾಗಿ ನಗರಸಭೆ / ಪುರಸಭೆ / ಪಟ್ಟಣ ಪಂಚಾಯತಿ ರಚನೆ ಮಾಡಲು ನಿರ್ಬಂಧಿಸಲಾಗಿದೆ. ಆದ್ದರಿಂದ ದಿನಾಂಕ 31–3–2011ರ ನಂತರ ನಿಯಮಾನುಸಾರ ಪಟ್ಟಣ ಪಂಚಾಯತಿ ರಚನೆಯ ಕ್ರಮ ಕೈಗೊಳ್ಳಲಾಗುವುದು.